# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ: 14ನೇ ನವೆಂಬರ್, 2017**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಹತ್ತು ಹಾಗೂ ಹನ್ನೊಂದನೆಯ ಪಟ್ಟಿಯ ರೀತ್ಯಾ)

### 03. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

### 04. ವರದಿಗಳನ್ನೊಪ್ಪಿಸುವುದು

**ಅ. ಶ್ರೀ ಐವನ್ ಡಿ'ಸೋಜಾ** (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಜಂಟಿ ಪರಿಶೀಲನಾ ಸಮಿತಿ) ಅವರು 2017ನೇ ಸಾಲಿನ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಪರಿಶೀಲಿಸಲು ರಚಿಸಲಾಗಿರುವ ಕರ್ನಾಟಕ ವಿಧಾನ ಮಂಡಲದ ಜಂಟಿ ಪರಿಶೀಲನಾ ಸಮಿತಿಯ ವರದಿಯನ್ನು ಒಪ್ಪಿಸುವುದು.

**ಆ. ಶ್ರೀ ಎನ್.ಎಸ್. ಬೋಸ್‌ರಾಜ್** (ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿ) ಅವರು ಕರ್ನಾಟಕ ವಿಧಾನ ಪರಿಷತ್ತಿನ ಎಂಭತ್ತೈದನೆಯ ವರದಿಯನ್ನು ಒಪ್ಪಿಸುವುದು.

### 05. ಅರ್ಜಿಯನ್ನೊಪ್ಪಿಸುವುದು

**ಶ್ರೀ ಆರ್. ಪ್ರಸನ್ನಕುಮಾರ್** ಅವರು ಸಣ್ಣ ನೀರಾವರಿ ಇಲಾಖೆಯಿಂದ ಉಡುಪಿ ತಾಲ್ಲೂಕಿನ ಕಾಡೂರು ಗ್ರಾಮದ ಯಾಪಿಕಡುವಿನಲ್ಲಿ ಹರಿಯುತ್ತಿರುವ ಸೀತಾ ನದಿಗೆ ನಿರ್ಮಿಸಿದ ವೆಂಟೆಡ್ ಡ್ಯಾಂನ ಕಳಪೆ ಕಾಮಗಾರಿ ಮತ್ತು ನಿರ್ವಹಣೆಯ ಕೊರತೆಯಿಂದ ಪೋಲಾಗುತ್ತಿರುವ ನೀರನ್ನು ಸಮರ್ಪಕ ರೀತಿಯಲ್ಲಿ ಬಳಕೆ ಮಾಡಲು ಅವಕಾಶ ಕಲ್ಪಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

..2..

## ೦6. ಗಮನ ಸೆಳೆಯುವ ಸೂಚನೆಗಳು

ಅ. **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** ಅವರು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳು ನಿಗಧಿತ ಕಾಲಮಿತಿಯೊಳಗೆ ಪೂರ್ಣಗೊಳ್ಳದೆ ಇರುವುದರಿಂದ, ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆ ಉಂಟಾಗಿರುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

ಆ. **ಶ್ರೀ ಐವನ್ ಡಿ'ಸೋಜಾ** ಅವರು ರಾಜ್ಯದಲ್ಲಿ ವ್ಯಾಪಕವಾಗಿ ಮಾದಕ ದ್ರವ್ಯಗಳ ಸಾಗಾಣಿಕೆ ಮತ್ತು ಸೇವನೆ ಕುರಿತು ಅನೇಕ ಪ್ರಕರಣಗಳು ದಾಖಲಾಗಿದ್ದು, ಇಲಾಖೆ ಕೈಗೊಂಡಿರುವ ಕ್ರಮಗಳ ಬಗ್ಗೆ **ಮಾನ್ಯ ಗೃಹ** ಸಚಿವರ ಗಮನ ಸೆಳೆಯುವುದು.

## ೦7. ನಿಯಮ ೩೩೦ರ ಮೇರೆಗೆ

ಅ. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ರಾಜ್ಯದಲ್ಲಿ ಆಕಸ್ಮಿಕ ಅವಘಡ, ಪ್ರಾಕೃತಿಕ ವಿಪತ್ತುಗಳು ಸಂಭವಿಸಿದಲ್ಲಿ ಮೃತರಾಗುತ್ತಿರುವ ನಾಗರೀಕರಿಗೆ ಸಮಾನವಾಗಿ ಪರಿಹಾರ ಒದಗಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

ಆ. **ಶ್ರೀ ಬಿ.ಜೆ. ಪುಟ್ಟಸ್ವಾಮಿ** ಅವರು ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿರುವ ಆಪ್ತ ಸಹಾಯಕರುಗಳಿಗೆ ಕಳೆದ ಎಂಟು-ಒಂಭತ್ತು ತಿಂಗಳುಗಳಿಂದ ವೇತನ ನೀಡದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council.htm